## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿತ್ರದುರ್ಗ ಜಿಲ್ಲೆಯಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ: 2021-22 ನೇ ಸಾಲಿನ ಆಯವ್ಯಯ ಘೋಷಣೆ

*****

**ಪ್ರಸ್ತಾವನೆ:**

ರಾಜ್ಯದಲ್ಲಿ ವೈದ್ಯಕೀಯ ಶಿಕ್ಷಣ ಇಲಾಖೆಯ ವ್ಯಾಪ್ತಿಯಲ್ಲಿ ಸರ್ಕಾರವು ನೀಡಲ್ಪಡುವ ಸಹಾಯಾನುದಾನದಿಂದ ಒಟ್ಟು 17 ಸರ್ಕಾರಿ ಸ್ವಾಯತ್ತ ವೈದ್ಯಕೀಯ ಕಾಲೇಜುಗಳು ಕಾರ್ಯನಿರ್ವಹಿಸುತ್ತಿದ್ದು, ಪ್ರಸ್ತುತದಲ್ಲಿ ಹೊಸ 04 ಸಂಸ್ಥೆಗಳ ಕಾಮಗಾರಿಗಳು ಪ್ರಗತಿಯಲ್ಲಿದ್ದು, ಇದರಲ್ಲಿ ಚಿಕ್ಕಬಳ್ಳಾಪುರ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ 100 ಎಂಬಿಬಿಎಸ್ ಸೀಟುಗಳ ಪ್ರವೇಶ ಮಿತಿಯೊಂದಿಗೆ 2022-23 ಸಾಲಿಗೆ ಲೆಟರ್ ಆಫ್ ಇಂಟೆಂಟ್ ನೀಡಿರುತ್ತಾರೆ. ರಾಜ್ಯದ ಬಡ ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಮೆರಿಟ್ ಆಧಾರದ ಮೇಲೆ ಸೀಟು ಹಂಚಿಕೆ ಮಾಡಲಾಗುತ್ತಿದೆ ಹಾಗೂ ಈ ವೈದ್ಯಕೀಯ ಕಾಲೇಜುಗಳಿಗೆ ಹೊಂದಿಕೊಂಡ ಆಸ್ಪತ್ರೆಗಳಿಗೆ ಆಗಮಿಸುವ ಬಡರೋಗಿಗಳಿಗೆ ಅತೀ ಕಡಿಮೆ ದರದಲ್ಲಿ ಉನ್ನತ ಮಟ್ಟದ ವೈದ್ಯಕೀಯ ಸೇವೆಗಳನ್ನು ಒದಗಿಸಲಾಗುತ್ತಿದೆ. ಜನಸಂಖ್ಯೆಗೆ ಅನುಗುಣವಾಗಿ ಹೊಸ ವೈದ್ಯಕೀಯ ಕಾಲೇಜಿನ ಸ್ಥಾಪನೆಯು ಅನಿವಾರ್ಯವಾಗಿರುತ್ತದೆ.

ವಿಶ್ವ ಆರೋಗ್ಯ ಸಂಸ್ಥೆಯ ನಿಯಮಗಳನ್ವಯ ಪ್ರತಿ ಸಾವಿರ ಜನಸಂಖ್ಯೆಗೆ ಒಬ್ಬ ವೈದ್ಯರು ಇರಬೇಕಾಗಿದ್ದು, ಪ್ರಸ್ತುತ ಕರ್ನಾಟಕ ರಾಜ್ಯದಲ್ಲಿ 1800 ಜನಸಂಖ್ಯೆಗೆ ಒಬ್ಬ ವೈದ್ಯರು ಇರುತ್ತಾರೆ. ವಿಶ್ವ ಆರೋಗ್ಯ ಸಂಸ್ಥೆಯ ನಿಯಮಗಳನ್ವಯ ಈ ಅಸಮತೋಲನವನ್ನು ಸರಿಪಡಿಸುವ ನಿಟ್ಟಿನಲ್ಲಿ ಹಾಗೂ ರಾಜ್ಯದ ಬಡ ಹಾಗೂ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ವೈದ್ಯಕೀಯ ಶಿಕ್ಷಣದಲ್ಲಿ ವ್ಯಾಸಂಗವನ್ನು ಮಾಡಲು ಹೆಚ್ಚಿನ ಅವಕಾಶವನ್ನು ಕಲ್ಪಿಸುವ ಮೂಲಕ ಉನ್ನತ ಶಿಕ್ಷಣವನ್ನು ಹೊಂದಲು ಮೈಲಿಗಲ್ಲನ್ನು ಉಂಟು ಮಾಡುವ ಸಲುವಾಗಿ ಸರ್ಕಾರಿ ವೈದ್ಯಕೀಯ ಕಾಲೇಜುಗಳಿರದ ಜಿಲ್ಲೆಗಳಲ್ಲಿ ಹೊಸ ವೈದ್ಯಕೀಯ ಕಾಲೇಜುಗಳನ್ನು ತೆರೆಯುವುದು ಸರ್ಕಾರದ ಉದ್ದೇಶವಾಗಿದ್ದು, ಅದರನ್ವಯ ಚಿತ್ರದುರ್ಗ ಜಿಲ್ಲೆಯಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಪ್ರಸ್ತಾಪಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ ಆಕುಕ 172 ಎಂಪಿಎಸ್ 2014, ದಿನಾಂಕ 12/06/2014 ರಲ್ಲಿ 2014-15 ನೇ ಸಾಲಿನ ಆಯವ್ಯಯ ಘೋಷಣೆಯಂತೆ ಚಿತ್ರದುರ್ಗ ಜಿಲ್ಲೆಯಲ್ಲಿ 2015-16 ನೇ ಸಾಲಿನಿಂದ 150 ಎಂಬಿಬಿಎಸ್ ಪ್ರವೇಶ ಮಿತಿಯೊಂದಿಗೆ ಹೊಸ ವೈದ್ಯಕೀಯ ಕಾಲೇಜನ್ನು ಸ್ಥಾಪಿಸಲು ತಾತ್ವಿಕ ಅನುಮೋದನೆ ನೀಡಲಾಗಿತ್ತು. ಆದರೆ, 2013-14 ನೇ ಆರ್ಥಿಕ ವರ್ಷಗಳಲ್ಲಿ ಗುಲ್ಬರ್ಗಾ, ಗದಗ, ಕೊಪ್ಪಳ, ಕಾರವಾರ, ಕೊಡಗು ಮತ್ತು ಚಾಮರಾಜನಗರ ಇಲ್ಲಿ 06 ಹೊಸ ವೈದ್ಯಕೀಯ ಕಾಲೇಜುಗಳ ನಿರ್ಮಾಣ ಕಾಮಗಾರಿಗಳಿಗೆ ಅಗತ್ಯವಿರುವ ಅನುದಾನವನ್ನು ಒದಗಿಸಿಕೊಳ್ಳಬೇಕಾಗಿದ್ದುದರಿಂದ, 2014-15 ನೇ ಸಾಲಿನ ಆಯವ್ಯಯದಲ್ಲಿ ಪ್ರಸ್ತಾಪಿಸಲಾಗಿರುವ ತುಮಕೂರು, ಚಿತ್ರದುರ್ಗ, ಬಾಗಲಕೋಟೆ, ಚಿಕ್ಕಬಳ್ಳಾಪುರ, ಹಾವೇರಿ ಮತ್ತು ಯಾದಗಿರಿ ವೈದ್ಯಕೀಯ ಕಾಲೇಜುಗಳ ಸ್ಥಾಪನೆ ಕಾರ್ಯವನ್ನು ಮುಂದೂಡಲಾಗಿತ್ತು.

Scanned with CamScanner

2021-22 ನೇ ಸಾಲಿನ ಆಯವ್ಯಯ ಘೋಷಣೆಯಲ್ಲಿ ಚಿತ್ರದುರ್ಗ ಜಿಲ್ಲೆಯಲ್ಲಿ ಸರ್ಕಾರಿ-ಖಾಸಗಿ ಸಹಭಾಗಿತ್ವದಲ್ಲಿ (ಪಿಪಿಪಿ ಮಾದರಿಯಲ್ಲಿ) ಹೊಸ ವೈದ್ಯಕೀಯ ಕಾಲೇಜನ್ನು ಪ್ರಾರಂಭಿಸಲು ಪ್ರಸ್ತಾಪಿಸಲಾಗಿತ್ತು.

ಪ್ರಸ್ತಾವನೆಯನ್ನು ಸಂಬಂಧಪಟ್ಟ ದಾಖಲಾತಿಗಳೊಂದಿಗೆ ಕೂಲಂಕಷವಾಗಿ ಪರಿಶೀಲಿಸಿದ ನಂತರ, ಚಿತ್ರದುರ್ಗ ಜಿಲ್ಲೆಯಲ್ಲಿ ಚಿತ್ರದುರ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಎಂಬ ಹೆಸರಿನ ಸ್ವಾಯತ್ತ ಸಂಸ್ಥೆಯ ಸ್ಥಾನಮಾನದೊಂದಿಗೆ 150 ಎಂಬಿಬಿಎಸ್ ಪ್ರವೇಶ ಮಿತಿಯೊಂದಿಗೆ "ಚಿತ್ರದುರ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ"ಯನ್ನು ಸಿವಿಲ್ ಕಾಮಗಾರಿ ಹಾಗೂ ಪೀಠೋಪಕರಣಗಳೂ ಸೇರಿ ಒಟ್ಟು ಅನಾವರ್ತಕ ವೆಚ್ಚ ರೂ. 500 ಕೋಟಿಗಳ ಅನುದಾನದಲ್ಲಿ ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಲು ಸರ್ಕಾರವು ತೀರ್ಮಾನಿಸಿ ಈ ಆದೇಶ ಹೊರಡಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ:ಎಂಇಡಿ 565 ಎಂಎಂಸಿ 2020, ಬೆಂಗಳೂರು ದಿನಾಂಕ:15/02/2022</u>**

ಚಿತ್ರದುರ್ಗ ಜಿಲ್ಲೆಯಲ್ಲಿ ಚಿತ್ರದುರ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ ಎಂಬ ಹೆಸರಿನ ಸ್ವಾಯತ್ತ ಸಂಸ್ಥೆಯ ಸ್ಥಾನಮಾನದೊಂದಿಗೆ 150 ಎಂಬಿಬಿಎಸ್ ಪ್ರವೇಶ ಮಿತಿಯೊಂದಿಗೆ "ಚಿತ್ರದುರ್ಗ ವೈದ್ಯಕೀಯ ವಿಜ್ಞಾನಗಳ ಸಂಸ್ಥೆ"ಯನ್ನು ಸಿವಿಲ್ ಕಾಮಗಾರಿ ಹಾಗೂ ಪೀಠೋಪಕರಣಗಳೂ ಸೇರಿ ಒಟ್ಟು ಅನಾವರ್ತಕ ವೆಚ್ಚ ರೂ. 500 ಕೋಟಿಗಳ ಅನುದಾನದಲ್ಲಿ ಪ್ರಾರಂಭಿಸಲು ಆಡಳಿತಾತ್ಮಕ ಅನುಮೋದನೆ ನೀಡಿ ಆದೇಶಿಸಿದೆ.

ಸದರಿ ಕಾಮಗಾರಿಯ ಟೆಂಡರ್ ಪ್ರಿಮಿಯಂ ನಿಬಂಧನೆ ಸೇರಿದಂತೆ ಪ್ರಸ್ತುತ ಎಸ್‌ಆರ್‌ನಲ್ಲಿನ ಒಟ್ಟು ವೆಚ್ಚ ರೂ. 500 ಕೋಟಿಗಳನ್ನು ಮೀರಬಾರದು. ಸದರಿ ವೆಚ್ಚವನ್ನು ಜಿಲ್ಲಾ ಗಣಿಗಾರಿಕೆ ನಿಧಿಯಿಂದ (District Mining Fund) ಭರಿಸತಕ್ಕದ್ದು. ಹಾಗೂ ಮುಂದಿನ ಮೂರು ವರ್ಷಗಳಲ್ಲಿ ಸದರಿ ವೆಚ್ಚವನ್ನು ವಿಸ್ತರಿಸತಕ್ಕದ್ದು.

ಚಿತ್ರದುರ್ಗದಲ್ಲಿ ಹೊಸ ವೈದ್ಯಕೀಯ ಕಾಲೇಜಿನ ನಿರ್ಮಾಣಕ್ಕಾಗಿ ಅಗತ್ಯವಿರುವ ಜಮೀನನ್ನು ಗುರುತಿಸಿ ಕಂದಾಯ ಇಲಾಖೆಯಿಂದ ಮಂಜೂರು ಮಾಡಿಸಿಕೊಂಡು ಈ ಜಮೀನಿನ ಮಾಲಿಕತ್ವದ ದಾಖಲೆಗಳನ್ನು ಹೊಸ ವೈದ್ಯಕೀಯ ಕಾಲೇಜಿನ ಹೆಸರಿಗೆ ವರ್ಗಾಯಿಸಲು ಚಿತ್ರದುರ್ಗ ಜಿಲ್ಲಾಡಳಿತವು ಕ್ರಮವಹಿಸತಕ್ಕದ್ದು.

ಮೇಲ್ಕಂಡ ಅನುಮೋದಿತ ಮೊತ್ತದ ಮಿತಿಯೊಳಗೆ ಸದರಿ ವೈದ್ಯಕೀಯ ಕಾಲೇಜಿನ ಸ್ಥಾಪನೆಗೆ ತಗಲುವ ಅನಾವರ್ತಕ ಮತ್ತು ಆವರ್ತಕ ವೆಚ್ಚದ ಐಟಂವಾರು ವಿವರಗಳೊಂದಿಗೆ ಸೂಕ್ತ ಪ್ರಸ್ತಾವನೆಯನ್ನು ಸರ್ಕಾರಕ್ಕೆ ಸಲ್ಲಿಸಲು ವೈದ್ಯಕೀಯ ಶಿಕ್ಷಣ ನಿರ್ದೇಶಕರು ಕ್ರಮವಹಿಸತಕ್ಕದ್ದು.

ಸದರಿ ವೈದ್ಯಕೀಯ ಕಾಲೇಜಿನ ಸ್ಥಾಪನೆಗೆ ಸಂಬಂದಿಸದಂತೆ ವೈದ್ಯಕೀಯ ಕಾಲೇಜು, ಬಾಲಕ ಮತ್ತು ಬಾಲಕಿಯರ ಹಾಸ್ಟೆಲ್ ಕಟ್ಟಡ, ಬೋಧಕ ಬೋಧಕೇತರ ಸಿಬ್ಬಂದಿಗಳ ವಸತಿ ನಿಲಯಗಳು ಹಾಗೂ ಇನ್ನಿತರೆ ಅಗತ್ಯ ಕಟ್ಟಡಗಳ ನಿರ್ಮಾಣಕ್ಕೆ ಪ್ರಸ್ತುತ ಚಾಲ್ತಿಯಲ್ಲಿರುವ ಎಸ್‌ಆರ್ ದರಗಳನ್ವಯ ಸವಿವರ ಅಂದಾಜು ಪಟ್ಟಿಯನ್ನು ಹಾಗೂ ನೀಲಿ ನಕ್ಷೆಯನ್ನು ಅಭಿಯಂತರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜಿನಿಯರಿಂಗ್ ಘಟಕ ಇವರಿಂದ ಪಡೆದು ವೈದ್ಯಕೀಯ ಶಿಕ್ಷಣ ನಿರ್ದೇಶಕರು, ಸರ್ಕಾರಕ್ಕೆ ಸಲ್ಲಿಸಲು ಕ್ರಮ ವಹಿಸತಕ್ಕದ್ದು.

ಚಿತ್ರದುರ್ಗ ಜಿಲ್ಲಾ ಆಸ್ಪತ್ರೆಯನ್ನು ಬೋಧನಾ ಆಸ್ಪತ್ರೆಯನ್ನಾಗಿ ಸಂಬಂಧಿಸಿದ ವೈದ್ಯಕೀಯ ಕಾಲೇಜಿನ ಆಡಳಿತಾತ್ಮಕ ನಿಯಂತ್ರಣಕ್ಕೆ ವರ್ಗಾಯಿಸಲು ಸೂಕ್ತ ಪ್ರಸ್ತಾವನೆಯನ್ನು ನಿರ್ದೇಶಕರು

15-2-2022

Scanned with CamScanner

ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ ಇವರು ಇವರು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಗೆ ಸಲ್ಲಿಸತಕ್ಕದ್ದು.

ಸದರಿ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ತನ್ನದೇ ಆದ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಿಕೊಳ್ಳಲು, ಬೈಲಾ ರಚನೆ ಮಾಡಲು ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಅಧ್ಯಕ್ಷತೆಯಲ್ಲಿ ಆಡಳಿತ ಮಂಡಳಿಯನ್ನು ರಚಿಸಲು ವೈದ್ಯಕೀಯ ಶಿಕ್ಷಣ ನಿರ್ದೇಶಕರು ಕ್ರಮವಹಿಸತಕ್ಕದ್ದು.

ಚಿತ್ರದುರ್ಗದಲ್ಲಿ ಹೊಸ ವೈದ್ಯಕೀಯ ಕಾಲೇಜನ್ನು 2023-24 ನೇ ಸಾಲಿನಿಂದ 150 ಎಂಬಿಬಿಎಸ್ ಸೀಟುಗಳ ಪ್ರವೇಶ ಮಿತಿಯೊಂದಿಗೆ ಹೊಸದಾಗಿ ಪ್ರಾರಂಭಿಸಲು Essentiality and Feasibility Certificate ಅನ್ನು ಸರ್ಕಾರದಿಂದ ಹೊರಡಿಸುವ ಸಂಬಂಧ ಸೂಕ್ತ ಪ್ರಸ್ತಾವನೆಯನ್ನು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯಕ್ಕೆ ಸಲ್ಲಿಸಿ, ವಿಶ್ವವಿದ್ಯಾಲಯದ ಶಿಫಾರಸ್ಸನ್ನು ಸರ್ಕಾರಕ್ಕೆ ಸಲ್ಲಿಸಲು ವೈದ್ಯಕೀಯ ಶಿಕ್ಷಣ ನಿರ್ದೇಶಕರು ಕ್ರಮವಹಿಸತಕ್ಕದ್ದು.

ಈ ವೈದ್ಯಕೀಯ ಕಾಲೇಜಿಗೆ ವರ್ಷವಾರು ಅಗತ್ಯವಿರುವ ಹುದ್ದೆಗಳ ಸೃಜನೆಗೆ ತಗಲುವ ವೆಚ್ಚದ ವಿವರಗಳೊಂದಿಗೆ ಪ್ರಸ್ತಾವನೆಯನ್ನು ವೈದ್ಯಕೀಯ ಕಾಲೇಜು ಕಾರ್ಯಾರಂಭಗೊಳ್ಳುವ ಮುನ್ನ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

ಈ ವೈದ್ಯಕೀಯ ಕಾಲೇಜಿನ ಸ್ಥಾಪನೆಗೆ ತಗಲುವ ಆವರ್ತಕ ಹಾಗೂ ಅನಾವರ್ತಕ ವೆಚ್ಚವನ್ನು ಭರಿಸಬಹುದಾದ ಲೆಕ್ಕ ಶೀರ್ಷಿಕೆಯನ್ನು ಸರ್ಕಾರದ ಮುಂದಿನ ಆದೇಶದಲ್ಲಿ ನಿರ್ದಿಷ್ಟಪಡಿಸಲಾಗುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯು ಕಡತ ಸಂಖ್ಯೆ ಎಂಇಡಿ 565 ಎಂಎಂಸಿ 2020 ರಲ್ಲಿನ ಕಂಡಿಕೆ 95 ರಲ್ಲಿ ನೀಡಿರುವ ಸಹಮತಿಯ ಮೇರೆಗೆ ಹಾಗೂ ದಿನಾಂಕ 27/01/2022 ರಂದು ನಡೆದ ಸಚಿವ ಸಂಪುಟದ ನಿರ್ಣಯದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

M. Jyothiprakash 15-2-2022

(ಎಂ.ಜ್ಯೋತಿಪ್ರಕಾಶ್)
ಸರ್ಕಾರದ ಅಧೀನ ಕಾರ್ಯದರ್ಶಿ-2,
ವೈದ್ಯಕೀಯ ಶಿಕ್ಷಣಇಲಾಖೆ

**ಇವರಿಗೆ**

1) ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
2) ಪ್ರಧಾನ ಮಹಾಲೇಖಪಾಲರು (ಜಿ & ಇ & ಆರ್ಎಸ್ಎ), ಕರ್ನಾಟಕ, ಹೊಸಕಟ್ಟಡ, "ಆಡಿಟ್ ಭವನ", ಅಂಚೆಪೆಟ್ಟಿಗೆ ಸಂಖ್ಯೆ:5398, ಬೆಂಗಳೂರು-01.
3) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್‌ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು-01.
4) ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
5) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿಗಳು, ವಿಧಾನಸೌಧ ಬೆಂಗಳೂರು.
6) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.

Scanned with CamScanner

7) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಕೆ, ವಿಕಾಸಸೌಧ, ಬೆಂಗಳೂರು
8) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಸತಿ ಇಲಾಖೆ, ವಿಕಾಸಸೌಧ. ಬೆಂಗಳೂರು.
9) ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಇಲಾಖೆ, ಆರೋಗ್ಯ ಸೌಧ.
10) ಜಿಲ್ಲಾಧಿಕಾರಿಗಳು, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.
11) ಅಧ್ಯಕ್ಷರು, ಕರ್ನಾಟಕ ಗೃಹ ಮಂಡಳಿ, ಕಾವೇರಿ ಭವನ, ಬೆಂಗಳೂರು
12) ಮುಖ್ಯ ಅಭಿಯಂತರರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಇಂಜಿನಿಯರಿಂಗ್ ವಿಭಾಗ, ಶೇಷಾದ್ರಿ ರಸ್ತೆ, ಬೆಂಗಳೂರು-01.
13) ನಿರ್ದೇಶಕರು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು-09.
14) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು-01.
15) ಸರ್ಕಾರದ ಉಪ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನಸೌಧ, ಬೆಂಗಳೂರು (ವಿಷಯ ಸಂಖ್ಯೆ: ಸಿ:4/2022)
16) ಸರ್ಕಾರದ ಅಧೀನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ-5), ವಿಧಾನಸೌಧ, ಬೆಂಗಳೂರು.
17) ಯೋಜನಾಧಿಕಾರಿಗಳು, ವೈದ್ಯಕೀಯ ಶಿಕ್ಷಣ ನಿರ್ದೇಶನಾಲಯ, ಆನಂದರಾವ್ ವೃತ್ತ, ಬೆಂಗಳೂರು.
18) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.

**ಪ್ರತಿ ಮಾಹಿತಿಗಾಗಿ:**

1) ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ.
3) ಸರ್ಕಾರದ ಜಂಟಿ ಕಾರ್ಯದರ್ಶಿಯವರ ಆಪ್ತ ಸಹಾಯಕರು, ವೈದ್ಯಕೀಯ ಶಿಕ್ಷಣ ಇಲಾಖೆ.

Scanned with CamScanner